146ನೇ ಅಧಿವೇಶನ
ನಿ-72
ಕ್ರ-71
ಕಲ್ಯಾಣ

**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಅರುಣ ಶಹಾಪುರ ಇವರು ನಿಯಮ 72 ರಡಿಯಲ್ಲಿ ಪ್ರಸ್ತಾಪಿಸಿರುವ ಸೂಚನೆ.**

**ವಿಷಯ**

ಸಾಮಾನ್ಯ ಆಡಳಿತ ಮಂಡಳಿಗಳ ಅನುದಾನ ರಹಿತ ಪದವಿ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸುವ ಕುರಿತು.

**ಉತ್ತರ**

ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ/551/ಯುಪಿಸಿ/99, ದಿನಾಂಕ:07.08.2003 ರಲ್ಲಿ ಹೊರಡಿಸಿರುವ ಕರ್ನಾಟಕ ಶಿಕ್ಷಣ ಸಂಸ್ಥೆಗಳು (ಕಾಲೇಜು ಶಿಕ್ಷಣ) ನಿಯಮ 2003ರ ನಿಯಮ 8(1)ರ ಪ್ರಕಾರ ದಿನಾಂಕ:01.06.1987ರ ನಂತರ ಪ್ರಾರಂಭಿಸಲಾದ ಯಾವುದೇ ಹೊಸ ಖಾಸಗಿ ಕಾಲೇಜು/ವಿಷಯಗಳು ಶಾಶ್ವತವಾಗಿ ಅನುದಾನ ಪಡೆಯಲು ಅವಕಾಶವಿರುವುದಿಲ್ಲ.

ಸರ್ಕಾರದ ಆದೇಶ ಸಂಖ್ಯೆ:ಇಡಿ/30/ಯುಪಿಸಿ/2008, ದಿನಾಂಕ:05.10.2009 ರಲ್ಲಿ ದಿನಾಂಕ:01.06.1987 ರಿಂದ 31.03.1995ರ ಅವಧಿಯಲ್ಲಿ ಪ್ರಾರಂಭಿಸಲ್ಪಟ್ಟು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಆಡಳಿತ ಮಂಡಳಿಗಳು ನಡೆಸುತ್ತಿರುವ ಅನುದಾನರಹಿತ ಪ್ರಥಮ ದರ್ಜೆ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸಲು ಸರ್ಕಾರ ಅವಕಾಶ ಕಲ್ಪಿಸಿರುತ್ತದೆ.

ಅದರಂತೆ, ಸ್ವೀಕೃತಗೊಂಡಿರುವ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಆಡಳಿತ ಮಂಡಳಿಗಳು ದಿನಾಂಕ:01.06.1987 ರಿಂದ 31.03.1995ರ ಅವಧಿಯಲ್ಲಿ ಪ್ರಾರಂಭಿಸಿ ನಡೆಸುತ್ತಿರುವ ಒಟ್ಟು 36 ಕಾಲೇಜುಗಳ ಪೈಕಿ ಈಗಾಗಲೇ ಒಟ್ಟು 33 ಕಾಲೇಜುಗಳನ್ನು ಸರ್ಕಾರದ ವೇತನಾನುದಾನಕ್ಕೆ ಒಳಪಡಿಸಲಾಗಿರುತ್ತದೆ.

ದಿನಾಂಕ:01.06.1987 ರಿಂದ 31.03.1995ರ ಅವಧಿಯಲ್ಲಿ ಪ್ರಾರಂಭಿಸಲಾದ ಸಾಮಾನ್ಯ ಆಡಳಿತ ಮಂಡಳಿಯಾದ ಪಂಡಿತ ಪಂಚಾಕ್ಷರಿ ಗವಾಯಿಗಳವರ ಅಂಧರ ಶಿಕ್ಷಣ ಸಂಸ್ಥೆಯ 02 ಕಾಲೇಜುಗಳನ್ನು ವಿಶೇಷ ಪ್ರಕರಣದಲ್ಲಿ ವೇತನಾನುದಾನಕ್ಕೆ ಒಳಪಡಿಸಲಾಗಿದೆ.

1987 ರಿಂದ 1995ರ ಅವಧಿಯಲ್ಲಿ ಪ್ರಾರಂಭಿಸಲ್ಪಟ್ಟ ಸಾಮಾನ್ಯ ಆಡಳಿತ ಮಂಡಳಿಗಳು ನಡೆಸುತ್ತಿರುವ ಪದವಿ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸಲು ಪ್ರಸ್ತಾವನೆಗಳು ಸ್ವೀಕೃತವಾದ ಕಾರಣ ಸಚಿವ ಸಂಪುಟ ಉಪ ಸಮಿತಿಯು ಕರ್ನಾಟಕ ಶಿಕ್ಷಣ ಸಂಸ್ಥೆಗಳು (ಕಾಲೇಜು ಶಿಕ್ಷಣ) ನಿಯಮಗಳು 2003ರ ನಿಯಮ 8(1)ಕ್ಕೆ ಸೂಕ್ತ ತಿದ್ದುಪಡಿ ತರುವಂತೆ ಶಿಫಾರಸ್ಸು ಮಾಡಿರುತ್ತದೆ. ಅದರಂತೆ, 1987 ರಿಂದ 1995ರ ಅವಧಿಯಲ್ಲಿ ಪ್ರಾರಂಭವಾಗಿರುವ ಖಾಸಗಿ ಅನುದಾನರಹಿತ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಸಂಬಂಧ "ಅನುದಾನಕ್ಕೆ ಒಳಪಡಿಸಲು ಪ್ರಸ್ತಾಪಿಸಿರುವ ಎಲ್ಲಾ ಕಾಲೇಜುಗಳನ್ನು ತಪಾಸಣೆ ನಡೆಸಿ ಅವುಗಳ ಮೂಲ ಸೌಲಭ್ಯಗಳ ವಿವರಗಳು, ಬೋಧಕರ ಸಂಖ್ಯೆಯು ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಇದೆಯೇ? ಎಂಬ ಬಗ್ಗೆ ವಿವರ, ತರಗತಿ ಕೊಠಡಿಗಳ ಮತ್ತು ಇತರ ಕಟ್ಟಡಗಳು ಸುಸ್ಥಿತಿಯಲ್ಲಿವೆಯೇ? ಎಂಬ ಬಗ್ಗೆ ಮತ್ತು ಪ್ರತಿ ಕೋರ್ಸಿಗೂ ಮಂಜೂರಾದ ವಿದ್ಯಾರ್ಥಿಗಳ ಪ್ರವೇಶ ಸಂಖ್ಯೆ ಹಾಗೂ ಹಾಲಿ ಇರುವ ವಿದ್ಯಾರ್ಥಿ ಸಂಖ್ಯೆ ಹಾಗೂ ಫಲಿತಾಂಶಗಳ ವಿವರಗಳ ಬಗ್ಗೆ ಸಮಿತಿಯನ್ನು ರಚಿಸಿ ಸರ್ಕಾರಕ್ಕೆ ವರದಿಯನ್ನು ಸಲ್ಲಿಸಲು ಕಾಲೇಜು ಶಿಕ್ಷಣ ಆಯುಕ್ತರನ್ನು ಕೋರಲಾಗಿದ್ದು, ಮಾಹಿತಿ ನಿರೀಕ್ಷಿಸಿದೆ.

....2.

ಈ ಮಧ್ಯೆ, ಆರ್ಥಿಕ ಇಲಾಖೆಯ ಸುತ್ತೋಲೆ ಸಂಖ್ಯೆ:ಆಇ 157 ವೆಚ್ಚ-8/2020, ದಿನಾಂಕ:10-06-2020ರ ಸುತ್ತೋಲೆಯಲ್ಲಿ ಕೋವಿಡ್-19ರ ಹಿನ್ನೆಲೆಯಲ್ಲಿ ತೀವ್ರ ಆರ್ಥಿಕ ಸಂಕಷ್ಟ ಉಂಟಾಗಿರುವುದರಿಂದ ಯಾವುದೇ ಅನುದಾನರಹಿತ ವಿದ್ಯಾಸಂಸ್ಥೆಗಳನ್ನು ವೇತನಾನುದಾನಕ್ಕೆ ಒಳಪಡಿಸಲು ಹಾಗೂ ಯಾವುದೇ ಹೊಸ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಅವಕಾಶವಿರುವುದಿಲ್ಲ. ಪ್ರಸ್ತುತ ಆರ್ಥಿಕ ಮಿತವ್ಯಯ ಆದೇಶ ಜಾರಿಯಲ್ಲಿರುವ ಕಾರಣ ಮಿತವ್ಯಯ ಆದೇಶವನ್ನು ತೆರವುಗೊಳಿಸಿದ ನಂತರ ಈ ಬಗ್ಗೆ ಪರಿಶೀಲಿಸಲಾಗುವುದು.

ಇಡಿ 26 ಯುಪಿಸಿ 2022

**(ಡಾ: ಅಶ್ವತ್ಥನಾರಾಯಣ ಸಿ.ಎನ್.)**
ಉನ್ನತ ಶಿಕ್ಷಣ, ಐ.ಟಿ.-ಬಿ.ಟಿ. ವಿಜ್ಞಾನ ಮತ್ತು
ತಂತ್ರಜ್ಞಾನ, ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು